ಇದ್ದಾರೆ ಅವರ ಮೇಲೆ ತನಿಖೆ ಮಾಡಿ ಕ್ರಮವನ್ನು ತೆಗೆದುಕೊಳ್ಳಬೇಕೆಂದು ನಾನು ಕೇಳಿಕೊಳ್ಳುತ್ತೇನೆ

ಶ್ರೀ ಶರಣಬಸಪ್ಪ ದರ್ಶನಾಪುರ ಕ್ರಮ ತೆಗೆದುಕೊಳ್ಳುತ್ತೇನೆ

ಸಂತೆ ಮಾರುಕಟ್ಟೆ ನಿರ್ಮಾಣ

134 (1139) – ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ) – ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧಗಿ ವಿಧಾನಸಭಾ ಕ್ಷೇತ್ರದಲ್ಲಿ ಸಂತೆ ಮಾರುಕಟ್ಟೆ ನಿರ್ಮಾಣಕ್ಕೆ ಕ್ರಮ ಕೈಗೊಂಡಿದೆಯೇ,

ಆ) ಈವರೆಗೆ ಎಷ್ಟು ಸಂತೆ ಮಾರುಕಟ್ಟೆಗಳನ್ನು ನಿರ್ಮಾಣ ಮಾಡಲಾಗಿದೆ, (ವಿವರ ನೀಡುವುದು),

ಇ) ಈಗಲಾದರೂ ಸಂತೆ ಮಾರುಕಟ್ಟೆ ನಿರ್ಮಾಣದಲ್ಲಿ ಹೆಚ್ಚಿನ ಹಣ ಬಿಡುಗಡೆ ಮಾಡಲಾಗುವುದೆ?

ಶ್ರೀ ಶರಣಬಸಪ್ಪ ದರ್ಶನಾಮರ (ಕೃಷಿ ಮಾರುಕಟ್ಟೆ ಸಚಿವರು)

ಅ) ಹೌದು

ಆ) 1 ನಬಾರ್ಡ್ ಧನ ಸಹಾಯದಡಿ ಆರ್ ಐ ಡಿ ಎಫ್–IX ರಲ್ಲಿ ಹೊರ್ತಿ ಗ್ರಾಮದಲ್ಲಿ ಗ್ರಾಮೀಣ ಸಂತೆಯನ್ನು ರೂ -11 21 ಲಕ್ಷ ಮೊತ್ತದಲ್ಲಿ ಅಭಿವೃದ್ಧಿಪಡಿಸಲಾಗಿದೆ

2 ನಬಾರ್ಡ್ ಧನ ಸಹಾಯದಡಿ ಆರ್ ಐ ಡಿ ಎಫ್–XIರಲ್ಲಿ ಕಲ್ಕೆರಿ, ಅಧರ್ಗಾ ಮತ್ತು ಟಂಬಾ ಗ್ರಾಮದಲ್ಲಿ ಸಂತೆ ಅಭಿವೃದ್ಧಿ ಕಾಮಗಾರಿಗಳಿಗೆ ಪ್ರತಿಯೊಂದಕ್ಕೆ ರೂ 10 00 ಲಕ್ಷದಂತೆ ಒಟ್ಟು ರೂ 30 00 ಲಕ್ಷಗಳಿಗೆ ಮಂಜೂರಾತಿ ನೀಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ

ಇ) 2006–07ನೇ ಸಾಲಿನಲ್ಲಿ ನಬಾರ್ಡ್ ಧನ ಸಹಾಯದಡಿ ಆರ್ ಐ ,ಡಿ ಎಫ್–XII ರಡಿಯಲ್ಲಿ ಹುಣಸಿಹಾಲ್ ಮತ್ತು ತೊಂಡಗಳಲ್ಲಿ ಸಂತೆಗಳನ್ನು ಪ್ರತಿ ಸಂತೆಗೆ ರೂ 10 00 ಲಕ್ಷಗಳಂತೆ ಒಟ್ಟಾರೆ ರೂ 20 00 ಲಕ್ಷಗಳಲ್ಲಿ ಅಭಿವೃದ್ಧಿಪಡಿಸಲು ನಬಾರ್ಡ್ ಸಂಸ್ಥೆಗೆ ಅನುಮೋದನೆಗೆ ಸಲ್ಲಿಸಲಾಗಿದೆ

7/4

ಶ್ರೀ ಅಶೋಕ್ ಗುರಪ್ಪ ಶಾಬಾದಿ ಮಾನ್ಯ ಸಚಿವರು ಉತ್ತರವನ್ನು ಒದಗಿಸಿದ್ದಾರೆ ಆದರೆ ನನ್ನ ಸಿಂಧಗಿ ಮತಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಸಂತೆ ಮಾರುಕಟ್ಟೆಗಳ ನಿರ್ಮಾಣ ನಡೆಯುವುದರ ಬಗ್ಗೆ ನಾನು ಕೇಳಿದ್ದೆ ಆದರೆ ಇಂಡಿ ತಾಲ್ಲೂಕಿನಲ್ಲಿ ಹಾಗೂ ಬೇರೆ ಮತಕ್ಷೇತ್ರಗಳಲ್ಲಿ ನಡೆಯುವ ಕಾಮಗಾರಿಗಳ ಬಗ್ಗೆ ಮಾಹಿತಿಯನ್ನು ಕೊಟ್ಟಿದ್ದಾರೆ ಆದರೆ ನನ್ನ ಮತಕ್ಷೇತ್ರದಲ್ಲಿ ಯಾವುದೇ ಸಂತೆ ಮಾರುಕಟ್ಟೆ ಕೆಲಸ ಇದುವರೆಗೆ ಪ್ರಾರಂಭವಾಗಿಲ್ಲ ಮತ್ತು 2006–07ನೇ ಸಾಲಿನಲ್ಲಿ ಹುಣಶೇಹಾಳ ಮತ್ತು ಚಾಂದ್‌ಕವಟೆ ಗ್ರಾಮಗಳಲ್ಲಿ ಸಂತೆ ಮಾರುಕಟ್ಟೆಗಳನ್ನು ಸ್ಥಾಪನೆ ಮಾಡುವ ಸಲುವಾಗಿ ಪ್ರಸ್ತಾವನೆಯನ್ನು ಕಳುಹಿಸಲಾಗಿತ್ತು ಆದರೆ ಹುಣಶೇಹಾಳ ಗ್ರಾಮಕ್ಕೆ ಮಾತ್ರ ಮಂಜೂರು ಮಾಡಿದ್ದಾರೆ ಚಾಂದ್‌ಕವಟೆಯಲ್ಲಿ ಅತ್ಯಂತ ಅವಶ್ಯಕವಾಗಿ ಬೇಕಾಗಿದೆ ಅಲ್ಲಿ ಅತಿ ದೊಡ್ಡ ಸಂತೆ ನಡೆಯತಕ್ಕಂತಹ ಪ್ರದೇಶ ಹಾಗೂ ಅದು ದೊಡ್ಡ ಗ್ರಾಮ ಪಂಚಾಯ್ತಿ ಕೇಂದ್ರವಿದೆ ಅಲ್ಲಿಗೆ ಮಂಜೂರು ಮಾಡಿಲ್ಲ ಅದಕ್ಕೆ ಕಾರಣವೇನು ಎನ್ನುವುದನ್ನು ಮಾನ್ಯ ಸಚಿವರು ಹೇಳಬೇಕು

ಶ್ರೀ ಶರಣಬಸಪ್ಪ ದರ್ಶನಾಪುರ್ (ಕೃಷಿ ಮಾರುಕಟ್ಟೆ ಸಚಿವರು) ಈಗಾಗಲೇ ಒಂದಕ್ಕೆ ಮಂಜೂರಾತಿಯನ್ನು ಕೊಟ್ಟಿದ್ದೇವೆ ಅಲ್ಲಿ ಇನ್ನು 15 ದಿವಸದಲ್ಲಿ ಕೆಲಸ ಶುರು ಮಾಡುತ್ತೇವೆ ಇನ್ನು ಚಾಂದ್‌ಕೋಟ್ ಬಗ್ಗೆ ಹೇಳಿದ್ದಾರೆ ಅದನ್ನು ಬರುವ ಮುಂದಿನ ದಿನಗಳಲ್ಲಿ ತೆಗೆದುಕೊಳ್ಳುತ್ತೇವೆ

ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಖಾಲಿ ನಿವೇಶನ ನೀಡುವ ಬಗ್ಗೆ

135 (481)– ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಪುರ (ಲಿಂಗಸುಗೂರು)– ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯಲ್ಲಿರುವ ಕೃಷಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ಖಾಲಿ ಇರುವ ನಿವೇಶನವನ್ನು "ಜಿಲ್ಲಾ ಕೃಷಿ ಸಮಾಜ" ಇದರ ಕಟ್ಟಡಕ್ಕೆ ಬಿಟ್ಟುಕೊಡುವ ಪ್ರಸ್ತಾವನೆಯು ಸರ್ಕಾರದಲ್ಲಿದೆಯೇ,

ಆ) ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ?

ಶ್ರೀ ಬಂಡೆಪ್ಪ ಕಾಶಂಪೂರ (ಕೃಷಿ ಸಚಿವರು)–

ಅ) ಇಲ್ಲ

ಆ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ